ಆನೇಕಲ್ ಪಟ್ಟಣದಲ್ಲಿ ಕುಡಿಯುವ ನೀರಿನ ತೊಂದರೆ

521 - ಶ್ರೀ ಎಂ.ಪಿ. ಕೇಶವಮೂರ್ತಿ (ಆನೇಕಲ್) : ಮಾನ್ಯ ವಸತಿ ಮತ್ತು ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) ಬೆಂಗಳೂರು ಜಿಲ್ಲೆಯ ಆನೇಕಲ್ ಪಟ್ಟಣದಲ್ಲಿ ಕುಡಿಯುವ ನೀರಿಗೆ ತೀವ್ರ ತೊಂದರೆ ಇರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ?

2) ಹಾಗಿದ್ದಲ್ಲಿ, ಈ ಭವಣೆ ನೀಗಿಸಲು ಸರ್ಕಾರದವರು ಜರೂರು ಕ್ರಮ ಕೈಗೊಳ್ಳುವರೇ?

ಶ್ರೀ ಕೆ.ಜೆ. ಜಾರ್ಜ್ (ವಸತಿ ಮತ್ತು ನಗರಾಭಿವೃದ್ಧಿ ಸಚಿವರು):

1) ಹೌದು.

2) ಅಭಾವ ಪರಿಹಾರ ಕಾಮಗಾರಿಯಲ್ಲಿ 2 ಕೊಳವೆ ಬಾವಿಗಳನ್ನು ಈಗಾಗಲೇ ಕೊರೆಯಲಾಗಿದ್ದು ಅವುಗಳಿಗೆ ಕೈ ಪಂಪುಗಳನ್ನು ಅಳವಡಿಸಲಾಗಿದೆ. ಇದಲ್ಲದೆ, ಒಂದು ತುರ್ತು ನೀರು ಸರಬರಾಜು ಯೋಜನೆಯನ್ನು ರೂ. 5 ಲಕ್ಷಗಳಿಗೆ ಕರ್ನಾಟಕ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯವರು ತಯಾರಿಸಿದ್ದಾರೆ. ಇದು ಸರ್ಕಾರದ ಪರಿಶೀಲನೆಯಲ್ಲಿದೆ.

ಅರಣ್ಯ ಭೂಮಿಗೆ ಸಂಬಂಧಿಸಿದ ಟಿಪ್ಪಣಿ ಕಾಪಿಗಳನ್ನು ತಿದ್ದುಪಡಿ ಮಾಡಿರುವ ಬಗ್ಗೆ

523 - ಶ್ರೀ ಡಿ.ಕೆ. ಶಿವಕುಮಾರ್ (ಸಾತನೂರು) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕನಕಪುರ ತಾಲ್ಲೂಕು, ಮರಳವಾಡಿ ಹೋಬಳಿ, ಸರ್ವೆ ನಂ.1,2,3, ಹಾಗೂ 4ನೇ ಹಿಡುವಳಿ ನಂಬರುಗಳಿಗೆ ಸಂಬಂಧಿಸಿದಂತೆ ಸರ್ವೆ ಇಲಾಖೆಯವರು ಇಪ್ಪತ್ತು ವರ್ಷಗಳ ಹಿಂದೆ ಮಾಡಿದ್ದ ಟಿಪ್ಪಣಿ ಕಾಪಿಗಳನ್ನು ತಿದ್ದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಈ ಸರ್ವೆ ನಂಬರುಗಳ ಹಿಡುವಳಿದಾರರು ಯಾರು?

ಇ) ಟಿಪ್ಪಣಿ ಕಾಪಿಗಳನ್ನು ತಿದ್ದುಪಡಿ ಮಾಡಿದ ಅಧಿಕಾರಿಗಳ ಮೇಲೆ ಯಾವ ಕ್ರಮ ತೆಗೆದುಕೊಳ್ಳಲಾಗಿದೆ?

ಶ್ರೀ ಎಂ. ಮಲ್ಲಿಕಾರ್ಜುನ ಖರ್ಗೆ (ಕಂದಾಯ ಸಚಿವರು):

ಅ) ಹೌದು.

ಆ) ರೀ ಸ. ನಂ. 1 ಸರ್ಕಾರಿ ಕಾದರಿಸಿರುವ ಫಾರೆಸ್ಟ್ ಜಮೀನು.

ರೀ ಸ.ನಂ.2 ಶ್ರೀ ಹೆಚ್. ಪುಟ್ಟದಾಸ

ರೀ ಸ.ನಂ.3 ಶ್ರೀ ಹೆಚ್. ಪುಟ್ಟದಾಸ

ರೀ ಸ.ನಂ.4 ಶ್ರೀ ಹೆಚ್. ಪುಟ್ಟದಾಸ

ಇ) ಸಂಬಂಧಪಟ್ಟ ಅಧಿಕಾರಿಗಳ ಮೇಲೆ ಶಿಸ್ತಿನ ಕ್ರಮ ತೆಗೆದುಕೊಳ್ಳಲಾಗುತ್ತಿದೆ.

ಪ್ಲಾಂಟೇಷನ್ ಸಬ್ಸಿಡಿ ಬಗ್ಗೆ

527 - ಶ್ರೀ ಜಿ.ಸಿ. ಮಾಧುಸ್ವಾಮಿ (ಚಿಕ್ಕನಾಯಕನಹಳ್ಳಿ) : ಮಾನ್ಯ ಕೃಷಿ ಮತ್ತು ತೋಟಗಾರಿಕೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ತೆಂಗಿನ ಬೆಳೆಗೆ ತೆಂಗು ಅಭಿವೃದ್ಧಿ ಮಂಡಳಿ ವತಿಯಿಂದ ಪ್ಲಾಂಟೇಶನ್ ಸಬ್ಸಿಡಿ ಕೊಡುತ್ತಿರುವುದು ಸರ್ಕಾರಕ್ಕೆ ತಿಳಿದಿದೆಯೇ?